ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೧೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**(ಮುಂದುವರೆದ ಅಧಿವೇಶನ)**

**ಬುಧವಾರ, ದಿನಾಂಕ: ೧೮ನೇ ಮಾರ್ಚ್, ೨೦೧೫**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಕರ್ನಾಟಕ ನೀರಾವರಿ ನಿಗಮ ಅಡಿಯಲ್ಲಿ ಬರುವ ಯೋಜನೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೬೬ (೧೭೫೯) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನೀರಾವರಿ ನಿಗಮದ ಅಡಿಯಲ್ಲಿ ಬರುವ ನೀರಾವರಿ ಯೋಜನೆಗಳ ಪುನಃಶ್ಚೇತನ ಯೋಜನೆಗಳನ್ನು ಸರ್ಕಾರ ಕೈಗೆತ್ತಿಕೊಳ್ಳಲು ಉದ್ದೇಶಿಸಿದೆಯೇ ;

(ಆ) ಹಾಗಿದ್ದಲ್ಲಿ, ಉದ್ದೇಶಿತ ಯೋಜನೆಗಳ ವಿವರವನ್ನು ನೀಡುವುದು ;

(ಇ) ಕರ್ನಾಟಕ ನೀರಾವರಿ ನಿಗಮದ ಅಡಿಯಲ್ಲಿ ಬರುವ ಯೋಜನೆಗಳಿಗೆ ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ದುರಸ್ಥಿ, ನಿರ್ವಹಣೆ, ನವೀಕರಣಕ್ಕಾಗಿ ಮಂಜೂರು ಮಾಡಿದ, ಬಿಡುಗಡೆ ಮಾಡಿದ ಮತ್ತು ವೆಚ್ಚ ಮಾಡಿರುವ ಅನುದಾನದ ಮೊತ್ತ ಎಷ್ಟು ? (ಯೋಜನೆವಾರು/ ವರ್ಷವಾರು ವಿವರಗಳನ್ನು ನೀಡುವುದು)

## ವಿವಿಧ ಕಾಮಗಾರಿಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೬೭ (೧೭೨೦) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ವಿವಿಧ ಕಾಮಗಾರಿಗಳಿಗೆ ೨೦೧೩–೧೪ ಮತ್ತು ೨೦೧೪–೧೫ರ ಆಯವ್ಯಯದಲ್ಲಿ ಮೀಸಲಿಟ್ಟ ಹಣದ ಮೊತ್ತ ಎಷ್ಟು ;

(ಆ) ಅದರಲ್ಲಿ, ವೆಚ್ಚ ಮಾಡಿರುವ ಹಣದ ಮೊತ್ತ ಎಷ್ಟು ? (ತಾಲ್ಲೂಕುವಾರು ಹಾಗೂ ಕಾಮಗಾರಿವಾರು ವಿವರ ನೀಡುವುದು)

## ಶ್ರೀಗಂಧದ ಮರಗಳ ಅಕ್ರಮ ಕಳ್ಳ ಸಾಗಾಣಿಕೆ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೬೮ (೧೭೭೪) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆನರಾ ವೃತ್ತದ ಯಲ್ಲಾಪೂರ ವಿಭಾಗದ, ಮುಂಡಗೋಡ ವಲಯದ ಗುಂಜಾವತಿ ಅರಣ್ಯ ಪ್ರದೇಶದ ಕುದುರೆನಾಳದಲ್ಲಿ ಶ್ರೀಗಂಧದ ಗಿಡಮರಗಳನ್ನು ಅಕ್ರಮವಾಗಿ ಕಡಿದು, ನಾಪತ್ತೆ ಮಾಡುತ್ತಿರುವುದರ ಹಿಂದೆ ಅಲ್ಲಿಯ ವಲಯ ಅರಣ್ಯಾಧಿಕಾರಿ ಹಾಗೂ ಸಿಬ್ಬಂದಿಗಳು ಶಾಮೀಲಾಗಿರುತ್ತಾರೆನ್ನುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಪ್ರಕರಣಗಳ ವಿವರ ನೀಡುವುದು)

(ಆ) ಸದರಿ ಘಟನೆ ನಡೆದ ೬ ದಿನಗಳ ನಂತರ ಅದು ಸಾರ್ವಜನಿಕರು ತಿಳಿಸಿದ ನಂತರ ಸಂಬಂಧಿಸಿದ ವಲಯ ಅರಣ್ಯಾಧಿಕಾರಿ ಎಫ್.ಐ.ಆರ್. ದಾಖಲಿಸಿಕೊಂಡಿರುತ್ತಾರೆ. ಆದರೆ ಈ ಪ್ರಕರಣದ ಆರೋಪಿ ಯಾರು ಎಂದು ಸರಿಯಾಗಿ ತಿಳಿಸದೆ, ನಿಷ್ಕಾಳಜಿ ಮಾಡಿರುವ ವಲಯ ಅರಣ್ಯಾಧಿಕಾರಿಯವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಕಳೆದ ೨ ವರ್ಷದಲ್ಲಿ ಮುಂಡಗೋಡ ವಲಯದಲ್ಲಿ ಆಗಿರುವ ಗುನ್ನೆ ಪ್ರಕರಣಗಳ ಭಾಗಾವಾರು ಮಾಹಿತಿ ನೀಡುವುದು ; (ಗುನ್ನೆ ರಿಜಿಸ್ಟರ್ ಪ್ರಕಾರ)

(ಈ) ಕೆನರಾ ವೃತ್ತದ ವಲಯದಲ್ಲಿ ಉಪ ವಲಯ ಅರಣ್ಯಾಧಿಕಾರಿಯಿಂದ ಬಡ್ತಿ ಪಡೆದು ನೇರವಾಗಿ ವಲಯ ಅರಣ್ಯಾಧಿಕಾರಿ ಹುದ್ದೆಗೆ ನೇಮಕಾತಿ ಹೊಂದಿ, ನೇರವಾಗಿ ವಲಯದ ಕಾರ್ಯಭಾರ ವಹಿಸುತ್ತಿರುವ ಇವರಿಂದ ವಲಯ ನಿಭಾಯಿಸುವುದು ಸಾಧ್ಯವಾಗದೇ ಇರುವುದು ಹಾಗೂ ಈ ಅರ್ಹತೆ ಅವರಿಗಿಲ್ಲದೆ ಇರುವುದರ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಉ) ಸರ್ಕಾರ ನೇರವಾಗಿ ವಲಯ ಅರಣ್ಯಾಧಿಕಾರಿ ಹುದ್ದೆಗೆ ನೇಮಕಾತಿ ಮಾಡಿಕೊಂಡಿರುವ ಅಧಿಕಾರಿಗಳಿಗೆ ವಲಯಗಳನ್ನು ನೀಡದೇ, ಬಡ್ತಿ ಹೊಂದಿರುವ ಅಭ್ಯರ್ಥಿಗಳಿಗೆ ಸಹಕಾರ ನೀಡುತ್ತಿರುವುದು ಸರಿಯಾದ ಕ್ರಮವೇ ? (ವಿವರ ನೀಡುವುದು)

## ಕ್ರೀಡೆಗಳನ್ನು ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೬೯ (೧೭೭೬) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಕ್ರೀಡೆಗಳನ್ನು ಹಾಗೂ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಿ, ಕ್ರೀಡೆಗಳನ್ನು ವೃದ್ಧಿಗೊಳಿಸಲು ಇಲಾಖೆಯ ವತಿಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ;

(ಆ) ಈ ಮೇಲಿನ ಜಿಲ್ಲೆಗಳಲ್ಲಿರುವ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಕ್ರೀಡಾಪಟುಗಳ ಸಂಖ್ಯೆ ಎಷ್ಟು ;

(ಇ) ವಿವಿಧ ಕ್ರೀಡೆಗಳಿಗೆ ಸಂಬಂಧಿಸಿದಂತೆ ಕ್ರೀಡಾ ಕೇಂದ್ರಗಳ ಸಂಖ್ಯೆ ಎಷ್ಟು ; ಈ ಜಿಲ್ಲೆಗಳಲ್ಲಿ ಕ್ರೀಡಾ ಚಟುವಟಿಕೆಗಳನ್ನು ಹೆಚ್ಚಿಸಲು ಮತ್ತು ಕ್ರೀಡಾಪಟುಗಳನ್ನು ಹೊಸದಾಗಿ ಆಯ್ಕೆ ಮಾಡಲು ಸರ್ಕಾರವು ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ?

## ಅವೈಜ್ಞಾನಿಕ ಮೀನುಗಾರಿಕೆಯಿಂದ ಪ್ರಾಣಿ, ಪಕ್ಷಿಗಳಿಗೆ ಅಪಾಯ

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೭೦ (೧೭೧೯) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕೆ ಇಲಾಖೆಯು ರಾಜ್ಯದಲ್ಲಿ ನಡೆಸುತ್ತಿರುವ ಮೀನು ಸಾಕಾಣಿಕೆ ಕೇಂದ್ರಗಳ ಸಂಖ್ಯೆ ಎಷ್ಟು ; ಯಾವ ಯಾವ ಭಾಗಗಳ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ ; ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ; (ಮಾಹಿತಿ ಒದಗಿಸುವುದು)

(ಆ) ಮೀನುಗಾರಿಕೆಗೆ ಗುತ್ತಿಗೆ ನೀಡುವಲ್ಲಿ ಅನುಸರಿಸುವ ಮಾನದಂಡಗಳೇನು ; ಮೀನುಗಾರಿಕೆ ನಡೆಸುವ ಸ್ಥಳಗಳಲ್ಲಿನ ಪ್ರಾಣಿ, ಪಕ್ಷಿಗಳ ಹಿತರಕ್ಷಣೆಗಾಗಿ ಇಲಾಖೆಯು ಅನುಸರಿಸುವ ವಿಧಾನಗಳೇನು ; (ವಿವರ ನೀಡುವುದು)

(ಇ) ಬೆಂಗಳೂರಿನ ಹೆಸರಘಟ್ಟದ ಕೆರೆಗೆ ಮೀನುಗಾರಿಕೆ ನಡೆಸಲು ಅನುಮತಿ ನೀಡಿರುವುದು ನಿಜವೇ ; ನಿಜವಿದ್ದಲ್ಲಿ, ಇದರಿಂದ ಬಂದ ಆದಾಯ ಎಷ್ಟು ; (ಕಳೆದ ಮೂರು ವರ್ಷಗಳ ಅವಧಿಯ ಪ್ರತ್ಯೇಕ ಮಾಹಿತಿ ಒದಗಿಸುವುದು)

(ಈ) ಇದರಿಂದಾಗಿ ಅಪರೂಪದ ಪಕ್ಷಿಗಳಿಗೆ ಅಪಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಪಶ್ಚಿಮಘಟ್ಟ ಯೋಜನೆಗಳ ಅನುಷ್ಠಾನ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೭೧ (೧೭೭೨) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶ್ಚಿಮಘಟ್ಟ ಯೋಜನೆಯಡಿಯಲ್ಲಿ ಕಳೆದ ೫ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ಹಾಗೂ ವೆಚ್ಚ ಮಾಡಲಾದ ಅನುದಾನ ಎಷ್ಟು ; (ಮಾಹಿತಿಯನ್ನು ನೀಡುವುದು)

(ಆ) ಪಶ್ಚಿಮಘಟ್ಟ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ಜಿಲ್ಲೆಗಳಾವುವು ; (ವಿವರ ನೀಡುವುದು)

(ಇ) ಈ ಅನುದಾನದಲ್ಲಿ ತೆಗೆದುಕೊಂಡ ಅಭಿವೃದ್ಧಿ ಕೆಲಸಗಳ ಭೌತಿಕ ಸಾಧನೆ ಹಾಗೂ ಆರ್ಥಿಕ ಸಾಧನೆಗಳೇನು ? (೨೦೧೪–೧೫ರ ಸಾಲಿನ (ಕೆಲಸವಾರು) ವಿವರ ನೀಡುವುದು)

## ಶಬ್ದ ಮಾಲಿನ್ಯದಿಂದ ನೇಕಾರರನ್ನು ಹೊರಗಿಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೭೨ (೧೭೨೬) ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜವಳಿ ಇಲಾಖೆ ಮೂಲಕ ಸಬ್ಸಿಡಿ ದರದಲ್ಲಿ ವಿದ್ಯುತ್ ಮಗ್ಗಗಳನ್ನು ನಗರ ಪ್ರದೇಶದಲ್ಲಿ ಅಳವಡಿಸಲು ಅನುಮತಿ ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಗರಾಭಿವೃದ್ಧಿ ಇಲಾಖೆಗೆ ಬಡನೇಕಾರರ ಪರವಾಗಿ ಪತ್ರ ವ್ಯವಹಾರ ಮಾಡಲಾಗಿದೆಯೇ ; ಮಾಡಿದ್ದರೆ, ಪತ್ರದ ಸಾರಾಂಶ ನೀಡುವುದು ;

(ಇ) ಬಡ ನೇಕಾರರಿಗೆ ತೊಂದರೆಯಾಗುತ್ತಿದ್ದರೂ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಈ) ಕೂಡಲೇ ಗಮನಹರಿಸಿ ವಿದ್ಯುತ್‌ಮಗ್ಗ ಹಾಕಲು ಅನುಮತಿ ಪಡೆಯಲು ಇಲಾಖೆ ಮುಂದಾಗುವುದೇ ?

## ಆಲಮಟ್ಟಿ ಅಣೆಕಟ್ಟಿನ ಗೇಟುಗಳನ್ನು ಎತ್ತರಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೭೩ (೧೭೬೭) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಲಮಟ್ಟಿ ಅಣೆಕಟ್ಟಿನ ಗೇಟುಗಳನ್ನು ಎತ್ತರಿಸುವ ಕಾರ್ಯ ಯಾವ ಹಂತದಲ್ಲಿದೆ ;

(ಆ) ಆಲಮಟ್ಟಿ ಅಣೆಕಟ್ಟಿನ ಗೇಟ್ ಅನ್ನು ಎತ್ತರಿಸುವುದರಿಂದ ಹಿನ್ನೀರಿನಲ್ಲಿ ಭಾದಿತವಾಗುವ ಗ್ರಾಮ ಹಾಗೂ ಜಮೀನುಗಳ ವಿಸ್ತೀರ್ಣ ಎಷ್ಟು ; (ವಿವರ ನೀಡುವುದು)

(ಇ) ಇದರಿಂದಾಗಿ ಬಾಗಲಕೋಟೆ ನಗರದ ಮೇಲಾಗುವ ಪರಿಣಾಮಗಳು ಏನು ;

(ಈ) ಈ ನಿಟ್ಟಿನಲ್ಲಿ ಸರ್ಕಾರದ ಕ್ರಮ ಏನು ?

## ಸಾಮಾಜಿಕ ಭದ್ರತೆ ಯೋಜನೆಗಳ ಹಣವನ್ನು ಬ್ಯಾಂಕ್ ಖಾತೆಗೆ ಜಮಾ

**ಡಾ: ಮತ್ತಿಕಟ್ಟೆ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೭೪ (೧೭೧೬) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಾಗರಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಆ) ಅರ್ಹ ನಾಗರಿಕರಿಗೆ ಮಂಜೂರಾದ ವೃದ್ಧಾಪ್ಯ ವೇತನ, ವಿಧವಾ ವೇತನ ಮುಂತಾದವುಗಳ ಹಣದ ದುರುಪಯೋಗವನ್ನು ತಡೆಗಟ್ಟಲು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಇಂತಹ ವಿವಿಧ ಯೋಜನೆಗಳ ಅಡಿಯಲ್ಲಿ ಮಂಜೂರಾದ ಮಾಸಾಶನದ ಹಣವನ್ನು ಆಧಾರ್ ಸಂಖ್ಯೆ ಪಡೆದು ನೇರವಾಗಿ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲಾಗುವುದೇ ?

## ಕಾವೇರಿ ನದಿಯ ನೀರಿನ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೭೫ (೧೭೩೩) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾವೇರಿ ನದಿ ನೀರಿನ ಹಂಚಿಕೆ ಬಗ್ಗೆ ಕಾವೇರಿ ಟ್ರಿಬ್ಯೂನಲ್‌ನ ಅಂತಿಮ ಆದೇಶದಲ್ಲಿರುವ ವಿವರಗಳು ಯಾವುವು ; (ಆಪರೇಟಿಂಗ್ ಮೋಸಿಷನ್, ಆದೇಶದ ಪ್ರತಿ ನೀಡುವುದು)

(ಆ) ಈ ತೀರ್ಪಿನನ್ವಯ ನಾವು ತಮಿಳುನಾಡಿಗೆ ಬಿಡಬೇಕಾದ ನೀರಿನ ಪ್ರಮಾಣ ಎಷ್ಟು ;

(ಇ) ೨೦೦೦-೧೪ರವರೆಗೂ ತಮಿಳುನಾಡಿಗೆ ಹರಿದುಹೋಗಿರುವ ನೀರಿನ ಪ್ರಮಾಣ ಎಷ್ಟು ; (ವಾರ್ಷಿಕವಾಗಿ ನೀರಿನ ಪ್ರಮಾಣದ ಮಾಹಿತಿ ಒದಗಿಸುವುದು)

(ಈ) ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಹರಿದು ಹೋಗುತ್ತಿರುವ ನೀರನ್ನು ಶೇಖರಿಸಿ ಸದುಪಯೋಗಪಡಿಸಿಕೊಳ್ಳಲು ಈ ನದಿಗೆ ಅಡ್ಡಲಾಗಿ ಮೇಕೆದಾಟುವಿನ ಹತ್ತಿರ ಅಣೆಕಟ್ಟು ಕಟ್ಟಲು ಇರುವ ತೊಂದರೆಯೇನು ;

(ಉ) ತೊಂದರೆ ಇಲ್ಲದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಇತ್ತೀಚಿನ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿನ ಕಾಡುಗಳಿಗೆ ಬೀಳುತ್ತಿರುವ ಬೆಂಕಿ

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೭೬ (೧೭೧೪) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಕಾಡುಗಳ ಸಂಖ್ಯೆ ಎಷ್ಟು ; ಆ ಪೈಕಿ ಕಳೆದ ೩ ತಿಂಗಳಿನಿಂದ ಎಷ್ಟು ಕಾಡುಗಳಲ್ಲಿ ಬೆಂಕಿ ಕಾಣಿಸಿಕೊಂಡಿದೆ ; ಈ ಬಗ್ಗೆ ಅರಣ್ಯ ಇಲಾಖೆ ತೆಗೆದುಕೊಂಡ ಮುಂಜಾಗ್ರತಾ ಕ್ರಮವೇನು ; ಈ ಬೆಂಕಿ ಅನಾಹುತದಿಂದ ಸರ್ಕಾರಕ್ಕೆ ಆಗಿರುವ ನಷ್ಟ ಎಷ್ಟು ;

(ಆ) ಬೆಂಕಿ ಅನಾಹುತಕ್ಕೆ ಕಾರಣವೇನು ; ಅರಣ್ಯ ಇಲಾಖೆಯವರೇ ಬೆಂಕಿ ಹಚ್ಚಿದ್ದಾರೆಯೇ ; ಹಾಗಿದ್ದಲ್ಲಿ, ಬೆಂಕಿ ಹಚ್ಚಿದ ಎಷ್ಟು ಮಂದಿಯನ್ನು ಪತ್ತೆ ಹಚ್ಚಲಾಗಿದೆ ; ಅವರ ಮೇಲೆ ತೆಗೆದುಕೊಂಡ ಕ್ರಮಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಇ) ಬೆಂಕಿ ತಗುಲಿದ್ದನ್ನು ತಡೆಗಟ್ಟಲು ಹೊಂಡ ತೆಗೆಯಬೇಕೆಂಬ ನಿಯಮ ಇದೆಯೇ ; ಎಷ್ಟು ಕಡೆ ಹೊಂಡ ತೆಗೆಯಲಾಗಿದೆ ; ಎಷ್ಟು ಕಾಡುಗಳಿಗೆ ಹೊಂಡ ತೆಗೆಯಬೇಕಿದೆ ?

## ಕರಾವಳಿ ಜಿಲ್ಲೆಗಳಲ್ಲಿ "ಪಶ್ಚಿಮವಾಹಿನಿ ಜಲಾಯನ" ಯೋಜನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೭೭ (೧೭೩೭) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡದಲ್ಲಿ ನೀರಿನ ಮಟ್ಟ ಮತ್ತು ಸೌಲಭ್ಯವನ್ನು ಹೆಚ್ಚಿಸಿ ರೈತರಿಗೆ ಅನುಕೂಲವಾಗುವಂತೆ "ಪಶ್ಚಿಮವಾಹಿನಿ ಜಲಾಯನ" ಯೋಜನೆ ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದರೆ ಯಾವ ಹಂತದಲ್ಲಿದೆ ;

(ಆ) ಪಶ್ಚಿಮವಾಗಿ ಹರಿಯುವ ನದಿಗಳಾದ ಗುರುಪುರ, ಶಾಂಭವಿ, ನಂದಿನಿ ಮತ್ತು ಹಳ್ಳಗಳಲ್ಲಿ ಕಿಂಡಿ ಅಣೆಕಟ್ಟುಗಳನ್ನು ಹಾಕುವ ಮುಖಾಂತರ ಈ ಯೋಜನೆ ಕೈಗೊಂಡಲ್ಲಿ ನೀರು ಶೇಖರಣೆಗೆ ನೀರಿನ ಮಟ್ಟವನ್ನು ಏರಿಸುವಲ್ಲಿ ಮತ್ತು ರೈತರಿಗೆ ದೊಡ್ಡ ಪ್ರಮಾಣದಲ್ಲಿ ಸಹಾಯಕಾರಿ ಆಗುವುದರ ಬಗ್ಗೆ ಚಿಂತಿಸಲಾಗಿದೆಯೇ ;

(ಇ) ಪಶ್ಚಿಮವಾಗಿ ಹರಿಯುವ ನದಿಗಳಿಗೆ ಎಷ್ಟು ಕಿಂಡಿ ಅಣೆಕಟ್ಟುಗಳನ್ನು ನಿರ್ಮಾಣ ಮಾಡಲಾಗಿದೆ ; ಎಷ್ಟು ಕಿಂಡಿ ಅಣೆಕಟ್ಟುಗಳನ್ನು ರಚನೆ ಮಾಡುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆ ?

## ಎಸ್.ಸಿ.ವಿ.ಟಿ./ಎನ್.ಸಿ.ವಿ.ಟಿ. ಪರೀಕ್ಷಾ ಕಾರ್ಯಕ್ಕೆ ಬೇರೆ ಇಲಾಖಾ ಸಿಬ್ಬಂದಿ ನೇಮಿಸಿದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೧೭೮ (೧೭೯೧) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿನ ಐ.ಟಿ.ಐ.ನ ಪ್ರಸಕ್ತ ಸಾಲಿನ ಎಸ್.ಸಿ.ವಿ.ಟಿ. ಹಾಗೂ ಎನ್.ಸಿ.ವಿ.ಟಿ. ಸೆಮಿಸ್ಟರ್‌ನ ಪರೀಕ್ಷಾ ಕಾರ್ಯಗಳಿಗೆ ಪೂರ್ಣ ಪ್ರಮಾಣದಲ್ಲಿ ಬೇರೆ ಇಲಾಖೆಯ ಸಿಬ್ಬಂದಿ ವರ್ಗದವರನ್ನು ನಿಯೋಜಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಬೇರೆ ಇಲಾಖೆಯ ಸಿಬ್ಬಂದಿ ವರ್ಗದವರನ್ನು ಪರೀಕ್ಷಾ ಕಾರ್ಯಕ್ಕೆ ಪೂರ್ಣ ಪ್ರಮಾಣದಲ್ಲಿ ನಿಯೋಜಿಸಲು ಕಾರಣಗಳೇನು ; (ವಿವರ ಒದಗಿಸುವುದು)

(ಇ) ಈ ಪರೀಕ್ಷಾ ಕಾರ್ಯಗಳಿಗೆ ಯಾವ ಯಾವ ಇಲಾಖೆಯ ಎಷ್ಟು ನೌಕರರನ್ನು ನೇಮಿಸಲಾಗಿದೆ ; (ವಿವರ ಒದಗಿಸುವುದು)

(ಈ) ಜಿಲ್ಲಾ ಹಂತದಲ್ಲಿ ಪರೀಕ್ಷಾ ಕಾರ್ಯಗಳ ಉಸ್ತುವಾರಿಯನ್ನು ಯಾವ ಇಲಾಖೆಯ ಅಧಿಕಾರಿಗಳಿಗೆ ವಹಿಸಲಾಗಿದೆ ; (ವಿವರ ಒದಗಿಸುವುದು)

(ಉ) ಸದರಿ ಪರೀಕ್ಷಾ ಕಾರ್ಯಗಳನ್ನು ನಿರ್ವಹಿಸಲು ಇಲಾಖೆಯ ಮಾರ್ಗಸೂಚಿಗಳು ಇದೆಯೇ ; ಇದ್ದಲ್ಲಿ, ಸದರಿ ಮಾರ್ಗಸೂಚಿಯ ಅಂಶಗಳೇನು ; (ವಿವರ ಒದಗಿಸುವುದು)

(ಊ) ಬೇರೆ ಇಲಾಖೆಯ ಸಿಬ್ಬಂದಿ ವರ್ಗದವರಿಂದ ಸದರಿ ಪರೀಕ್ಷಾ ಕಾರ್ಯ ನಿರ್ವಹಿಸುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಹಾಗಾದರೆ, ಈ ಸಂಬಂಧ ವಿದ್ಯಾರ್ಥಿಗಳಿಗೆ ಉಂಟಾಗಲಿರುವ ತೊಂದರೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ನ್ಯಾಯಾಲಯ ಪ್ರಕರಣಗಳ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭೯ (೧೭೦೧) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಉತ್ತರ ತಾಲ್ಲೂಕು ಕಚೇರಿಯಲ್ಲಿ ರೈತರಿಗೆ ಮತ್ತು ಸಾರ್ವಜನಿಕರಿಗೆ ನ್ಯಾಯಾಲಯದ ಆದೇಶಗಳನ್ನು ದಾಖಲಿಸಿ ಪಹಣಿ ನೀಡಲು ವಿಳಂಬ ನೀತಿ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನ್ಯಾಯಾಲಯದ ಆದೇಶಗಳನ್ನು ಪಹಣಿಯಲ್ಲಿ ದಾಖಲು ಮಾಡಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ನ್ಯಾಯಾಲಯದಲ್ಲಿ ಈ ಪ್ರಕರಣಗಳನ್ನು ತುರ್ತಾಗಿ ವಿಲೇ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ನ್ಯಾಯಾಲಯದ ಪ್ರಕರಣಗಳನ್ನು ಇತ್ಯರ್ಥಗೊಳಿಸುವಲ್ಲಿ ವಿನಾ ಕಾರಣ ವಿಳಂಬ ನೀತಿ ಅನುಸರಿಸುತ್ತಿರುವ ಅಧಿಕಾರಿಗಳು/ಸಿಬ್ಬಂದಿಯವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಬಾಕಿ ಇರುವ ಪ್ರಕರಣಗಳನ್ನು ಯಾವ ಕಾಲಮಿತಿಯೊಳಗೆ ಇತ್ಯರ್ಥ ಪಡಿಸಲಾಗುವುದು ?

## ಕರಾವಳಿ ನಿಯಂತ್ರಣ ವಲಯದ ಕಾಯಿದೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೮೦ (೧೫.೨೭) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಜಿಲ್ಲೆಗಳಲ್ಲಿ ಕರಾವಳಿ ನಿಯಂತ್ರಣ ವಲಯ ಕಾಯಿದೆಯಿಂದ (CRZ) ಸಾಂಪ್ರದಾಯಕ ಮೀನುಗಾರರು ಸೇರಿದಂತೆ ಸ್ಥಳೀಯ ನಿವಾಸಿಗಳಿಗೆ ಕಟ್ಟಡ ನಿರ್ಮಾಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇವರ ವಾಸ್ತವ್ಯದ ಕಟ್ಟಡ ನಿರ್ಮಾಣಕ್ಕೆ ಅನುಕೂಲವಾಗುವಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಇ) ಕರಾವಳಿ ಜಿಲ್ಲೆಯ ಕರಾವಳಿ ನಿಯಂತ್ರಣ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮಕ್ಕೆ ಅವಕಾಶ ಕಲ್ಪಿಸಲು ಹಾಗೂ ಪ್ರೋತ್ಸಾಹಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಕ್ರಮ ಕೈಗೊಳ್ಳದಿದ್ದಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ಮತ್ತು ಯಾವಾಗ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 1219 – ಪಿ5